ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಸ್ವಾತಂತ್ರ್ಯದ ಅಮೃತ ಮಹೋತ್ಸವ
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ16/33327/2022-23 ದಿನಾಂಕ : 12 JUL 2022

## ಸುತ್ತೋಲೆ

**ವಿಷಯ:** ಕವಿಪ್ರನಿನಿ ಹಾಗೂ ಎಸ್ಕಾಂಗಳಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ನೌಕರರು ನಿಗಮ/ಎಸ್ಕಾಂಗಳಲ್ಲಿ ಬೇರೊಂದು ಹುದ್ದೆಗೆ ನೇರ ನೇಮಕಾತಿ ಹೊಂದಿ, ಹಿಂದಿನ ಹುದ್ದೆಯ ಸೇವೆಯಿಂದ ಬಿಡುಗಡೆಗೊಳ್ಳುವಾಗ ನಿಗಮಕ್ಕೆ ವೇತನ/ಕ್ರೋಢೀಕೃತ ಸಂಭಾವನೆಯನ್ನು ಪಾವತಿಸುವುದರಿಂದ ವಿನಾಯಿತಿ ನೀಡುವ ಬಗ್ಗೆ.

***

ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ಈಗಾಗಲೇ ವಿವಿಧ ಹುದ್ದೆಗಳಿಗೆ ನೇಮಕಾತಿ ಹೊಂದಿ ಪರೀಕ್ಷಾರ್ಥ ಅವಧಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಲವು ಅಧಿಕಾರಿ/ನೌಕರರು ಕವಿಪ್ರನಿನಿ ಅಥವಾ ಎಸ್ಕಾಂಗಳಲ್ಲಿನ ಉದ್ಯೋಗ ಪ್ರಕಟಣೆಗೆ ಅನುಗುಣವಾಗಿ ಅರ್ಜಿ ಸಲ್ಲಿಸಿ, ಕವಿಪ್ರನಿನಿ ಅಥವಾ ಎಸ್ಕಾಂಗಳಲ್ಲಿ ಸಮಾನ ಹುದ್ದೆ ಅಥವಾ ಮೇಲ್ಮಟ್ಟದ ಹುದ್ದೆಗಳಿಗೆ ಆಯ್ಕೆಯಾಗುತ್ತಿದ್ದಾರೆ. ಅಂತಹ ನೌಕರರು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹುದ್ದೆಯನ್ನು ಬಿಟ್ಟು ಹೊಸ ಹುದ್ದೆಗೆ ಸೇರಲು ಬಯಸಿದ್ದಲ್ಲಿ, ಸದರಿಯವರಿಂದ ಮೂಲ ನೇಮಕಾತಿ ಆದೇಶದ ಷರತ್ತಿನ ಪ್ರಕಾರ ದಂಡದ ಮೊತ್ತವನ್ನು ಪಾವತಿಸುವಂತೆ ಸಕ್ಷಮ ಪ್ರಾಧಿಕಾರಿಗಳು ನಿರ್ದೇಶಿಸುತ್ತಿರುವುದು ನಿಗಮದ ಗಮನಕ್ಕೆ ಬಂದಿರುತ್ತದೆ.

ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿನ ಅಧಿಕಾರಿ/ನೌಕರರು ಹಾಲಿ ಕಾರ್ಯನಿರ್ವಹಿಸುತ್ತಿರುವ ಹುದ್ದೆಯಿಂದ ಸಮಾನ ಹುದ್ದೆ ಅಥವಾ ಉನ್ನತ ಹುದ್ದೆಗೆ ಆಯ್ಕೆಗೊಂಡರೂ, ಅವರುಗಳು ಕವಿಪ್ರನಿನಿ ಅಥವಾ ಎಸ್ಕಾಂಗಳ ಸೇವೆಯಲ್ಲಿಯೇ ಮುಂದುವರೆಯುವುದರಿಂದ ದಂಡ ವಸೂಲಿ ಮಾಡುವ ಅಗತ್ಯತೆ ಕಂಡು ಬರುವುದಿಲ್ಲ.

ಆದ್ದರಿಂದ, ಕವಿಪ್ರನಿನಿ ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ನೇಮಕಾತಿಗೊಂಡು ಪರೀಕ್ಷಾರ್ಥ ಅವಧಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ಕವಿಪ್ರನಿನಿ ಅಥವಾ ವಿವಿಧ ಎಸ್ಕಾಂಗಳಲ್ಲಿ ಮಾತ್ರ ಸಮಾನ ಹುದ್ದೆ ಅಥವಾ ಉನ್ನತ ಹುದ್ದೆಗೆ ಆಯ್ಕೆಯಾಗಿ, ಹೊಸ ಹುದ್ದೆಯನ್ನು ಸೇರಲು ಹಿಂದಿನ ಹುದ್ದೆಯನ್ನು ಬಿಡಲು ಬಯಸುವ ಪ್ರಕರಣಗಳಲ್ಲಿ ಅಂತಹ ನೌಕರರಿಂದ ಮೂಲ ವೇತನ ಅಥವಾ ಕ್ರೋಡಿಕೃತ ಸಂಭಾವನೆಯನ್ನು ದಂಡದ ರೂಪದಲ್ಲಿ ವಸೂಲಿ ಮಾಡುವುದಕ್ಕೆ ವಿನಾಯಿತಿ ನೀಡಲಾಗಿದೆ ಎಂದು ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.

3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/ನಿರ್ದೇಶಕರು(ಹಣಕಾಸು)/ ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

https://kptcl.karnataka.gov.in for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಆರ್.ಹೆಚ್.ಲಕ್ಷ್ಮೀಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ (ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ /ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.